**Akashvani : Bangalore**
**National Bulletin In Kannada**
**15.05.2024 / 7.35 am**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**15.05.2024 / 7.35 am**

**<><*<><>*><>**

<u>ಮುಖ್ಯಾಂಶಗಳು</u>

೧. ಏಳನೇ ಹಾಗೂ ಅಂತಿಮ ಹಂತದ ಲೋಕಸಭಾ ಚುನಾವಣೆಗೆ ಇಂದು ನಾಮಪತ್ರ ಪರಿಶೀಲನೆ

೨. ಸಾರ್ವತ್ರಿಕ ಚುನಾವಣೆಗೆ ಮಹಾರಾಷ್ಟ್ರ, ಉತ್ತರಪ್ರದೇಶ, ದೆಹಲಿಯಲ್ಲಿ ರಾಜಕೀಯ ಮುಖಂಡರಿಂದ ಅಬ್ಬರದ ಪ್ರಚಾರ

೩. ಭಾರತದ ಅತಿದೊಡ್ಡ ಕೌಶಲ್ಯ ಸ್ಪರ್ಧೆ 'ಇಂಡಿಯಾ ಸ್ಕಿಲ್ಸ್ -೨೦೨೪' ನವದೆಹಲಿಯಲ್ಲಿಂದು ಪ್ರಾರಂಭ

೪. ಐಪಿಎಲ್ ಟಿ-೨೦ ಕ್ರಿಕೆಟ್; ಲಖನೌ ಸೂಪರ್ ಜೈಂಟ್ಸ್ ವಿರುದ್ಧ ಡೆಲ್ಲಿ ಕ್ಯಾಪಿಟಲ್ಸ್‌ಗೆ ೧೯ ರನ್‌ಗಳ ಜಯ

**<><*<><>*><>**

ಏಳನೇ ಹಾಗೂ ಕೊನೆಯ ಹಂತದ ಲೋಕಸಭಾ ಚುನಾವಣೆಗೆ ಅಭ್ಯರ್ಥಿಗಳು ಸಲ್ಲಿಸಿರುವ ನಾಮಪತ್ರಗಳ ಪರಿಶೀಲನೆ ಇಂದು ನಡೆಯಲಿದೆ. ಉಮೇದುವಾರಿಕೆ ಸಲ್ಲಿಕೆಗೆ ನಿನ್ನೆ ಕೊನೆಯ ದಿನವಾಗಿತ್ತು. ಈ ಹಂತದಲ್ಲಿ ಏಳು ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶದ ಒಂದು ಸೇರಿದಂತೆ ಒಟ್ಟು ೫೭ ಲೋಕಸಭಾ ಕ್ಷೇತ್ರಗಳಿಗೆ ಚುನಾವಣೆ ನಡೆಯಲಿದೆ. ಉತ್ತರಪ್ರದೇಶ ಮತ್ತು ಪಂಜಾಬ್ ತಲಾ ೧೩, ಪಶ್ಚಿಮ ಬಂಗಾಳದ ೯, ಬಿಹಾರದ ೮, ಒಡಿಶಾದ ೬, ಹಿಮಾಚಲ ಪ್ರದೇಶದ ೪, ಜಾರ್ಖಂಡ್‌ನ ೩ ಹಾಗೂ ಕೇಂದ್ರಾಡಳಿತ ಪ್ರದೇಶ ಚಂಡೀಗಢದ ೧ ಕ್ಷೇತ್ರಗಳಿಗೆ ಜೂನ್ ೧ ರಂದು ಮತದಾನ ನಡೆಯಲಿದೆ. ಅಭ್ಯರ್ಥಿಗಳು ನಾಮಪತ್ರ ಹಿಂಪಡೆಯಲು ಇದೇ ೧೭ ಕಡೆಯ ದಿನವಾಗಿದೆ.

**<><*<><>*><>**

ಪ್ರಧಾನಿ ಮತ್ತು ಬಿಜೆಪಿ ಹಿರಿಯ ನಾಯಕ ನರೇಂದ್ರ ಮೋದಿ ಮಹಾರಾಷ್ಟ್ರದ ಘಾಟ್‌ಕೋಪರ್‌ನಲ್ಲಿಂದು ಸಂಜೆ ರೋಡ್‌ಶೋ ನಡೆಸಲಿದ್ದಾರೆ. ಈ ವೇಳೆ ಅವರು ಈಶಾನ್ಯ ಮುಂಬೈ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಪರ ಮತಯಾಚಿಸಲಿದ್ದಾರೆ. ರೋಡ್ ಶೋ ಹಿನ್ನೆಲೆ ಘಾಟ್ಕೋಪರ್ ಮತ್ತು ಸುತ್ತಮುತ್ತ ಹೆಚ್ಚುವರಿ ಸಂಚಾರ ನಿರ್ಬಂಧಗಳನ್ನು ಅಗತ್ಯಕ್ಕೆ ಅನುಗುಣವಾಗಿ ಜಾರಿಗೊಳಿಸಲಾಗಿದೆ. ಸ್ಥಳೀಯರಿಗೆ ಪರ್ಯಾಯ ಮಾರ್ಗಗಳನ್ನು ಬಳಸಲು ಮತ್ತು ಅದಕ್ಕೆ ಅನುಗುಣವಾಗಿ ತಮ್ಮ ಪ್ರಯಾಣವನ್ನು ಯೋಜಿಸಲು ಸಂಚಾರ ಪೊಲೀಸ್ ಇಲಾಖೆ ಸಲಹೆ ನೀಡಿದೆ. ರೋಡ್ ಶೋ ಗೂ ಮುನ್ನ ಪ್ರಧಾನಿ, ಡಿಂಡೋರಿ ಹಾಗೂ ಭೀವಾಂಡಿಯಲ್ಲಿ ನಡೆಯಲಿರುವ ಸಾರ್ವಜನಿಕ ಸಭೆಗಳಲ್ಲಿ ಪಾಲ್ಗೊಳ್ಳಲಿದ್ದಾರೆ.

<><*<><>*><>

ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ, ಅಮೇಥಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಹಾಗೂ ಕೇಂದ್ರ ಸಚಿವೆ ಸ್ಮೃತಿ ಇರಾನಿ ಪರವಾಗಿ ಉತ್ತರ ಪ್ರದೇಶದ ಮುನ್ಷಿಗಂಜ್‌ನಲ್ಲಿ ನಿನ್ನೆ ಸಾರ್ವಜನಿಕ ಸಭೆಯ ಮೂಲಕ ಮತಯಾಚನೆ ಮಾಡಿದರು. ಉತ್ತರಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅಮೇಥಿಯಲ್ಲಿ ನಡೆದ ರ‍್ಯಾಲಿಯಲ್ಲಿ ಪಾಲ್ಗೊಂಡು ಮಾತನಾಡಿದರು. ಮತ್ತೊಂದೆಡೆ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕಾ ಗಾಂಧಿ ವಾದ್ರಾ, ಅಮೇಥಿಯಲ್ಲಿ ನಿನ್ನೆ ಸಾರ್ವಜನಿಕ ಸಭೆಗಳ ಮೂಲಕ ಕಾಂಗ್ರೆಸ್ ಅಭ್ಯರ್ಥಿ ಪರ ಮತಯಾಚನೆ ಮಾಡಿದರು. ಸಮಾಜವಾದಿ ಪಕ್ಷದ ಮುಖ್ಯಸ್ಥ ಅಖಿಲೇಶ್ ಯಾದವ್, ಕಾಂಗ್ರೆಸ್ ಮುಖಂಡ ರಾಹುಲ್ ಗಾಂಧಿಯವರ ಜೊತೆಗೂಡಿ ಝಾನ್ಸಿಯಲ್ಲಿ ಕಾಂಗ್ರೆಸ್ ಅಭ್ಯರ್ಥಿಯಾಗಿರುವ ಪ್ರದೀಪ್ ಜೈನ್ ಪರ ಮತಯಾಚನೆ ಮಾಡಿದರು. ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಗೋರಖ್‌ಪುರ ಸಮೀಪದ ಚೌರಿ ಚೌರಾ ಹಾಗೂ ಮಹಾರಾಜ್‌ಗಂಜ್‌ನಲ್ಲಿ ಏರ್ಪಡಿಸಿದ್ದ ರ‍್ಯಾಲಿಗಳಲ್ಲಿ ಭಾಗವಹಿಸಿ ಪಕ್ಷದ ಅಭ್ಯರ್ಥಿಗಳ ಪರ ಮತಯಾಚನೆ ಮಾಡಿದರು.

<><*<><>*><>

ದೆಹಲಿಯ ಏಳು ಲೋಕಸಭಾ ಕ್ಷೇತ್ರಗಳಲ್ಲಿ ರಾಜಕೀಯ ಪ್ರಚಾರ ತೀವ್ರಗೊಂಡಿದ್ದು, ಮತದಾರರನ್ನು ಓಲೈಸಲು ಪ್ರಮುಖ ರಾಜಕೀಯ ನಾಯಕರು ರ‍್ಯಾಲಿ, ಸಾರ್ವಜನಿಕ ಸಭೆ ಮತ್ತು ರೋಡ್ ಶೋಗಳನ್ನು ನಡೆಸುತ್ತಿದ್ದಾರೆ. ಬಿಜೆಪಿ ನಾಯಕ ಮತ್ತು ಮಧ್ಯಪ್ರದೇಶದ ಮಾಜಿ ಮುಖ್ಯಮಂತ್ರಿ ಶಿವರಾಜ್ ಸಿಂಗ್ ಚೌಹಾಣ್ ಈಶಾನ್ಯ ದೆಹಲಿ ಕ್ಷೇತ್ರದಿಂದ ಸ್ಪರ್ಧಿಸುತ್ತಿರುವ ಬಿಜೆಪಿ ಅಭ್ಯರ್ಥಿ ಪರವಾಗಿ ಕಮಲಾನಗರ ಪ್ರದೇಶದಲ್ಲಿ ನಿನ್ನೆ ಸಾರ್ವಜನಿಕ ಸಭೆ ನಡೆಸಿದರು. ಅಸ್ಸಾಂ ಮುಖ್ಯಮಂತ್ರಿ ಮತ್ತು ಬಿಜೆಪಿ ನಾಯಕ ಹೇಮಂತ ಬಿಸ್ವಾ ಶರ್ಮಾ ಪೂರ್ವ-ದೆಹಲಿ ಸಂಸದೀಯ ಕ್ಷೇತ್ರದ ಪಕ್ಷದ ಅಭ್ಯರ್ಥಿ ಪರವಾಗಿ ಲಕ್ಷ್ಮಿನಗರ ಪ್ರದೇಶದಲ್ಲಿ ಸಾರ್ವಜನಿಕ ಸಭೆಯಲ್ಲಿ ಪಾಲ್ಗೊಂಡರು. ಬಿಜೆಪಿಯ ನಾಯಕ ಮತ್ತು ಮಧ್ಯಪ್ರದೇಶದ ಮುಖ್ಯಮಂತ್ರಿ ಮೋಹನ್ ಯಾದವ್ ಮಟಿಲಯಾ ಪ್ರದೇಶದಲ್ಲಿ ರೋಡ್ ಶೋ ನಡೆಸಿದರು. ಮತ್ತೊಂದೆಡೆ, ಆಮ್ ಆದ್ಮಿ ಪಕ್ಷದ ಹಿರಿಯ ನಾಯಕ ಮತ್ತು ರಾಜ್ಯಸಭಾ ಸಂಸದ ಸಂಜಯ್ ಸಿಂಗ್ ಪಶ್ಚಿಮ ದೆಹಲಿ ಲೋಕಸಭಾ ಕ್ಷೇತ್ರದ ಪಕ್ಷದ ಅಭ್ಯರ್ಥಿ ಪರವಾಗಿ ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಮಾತನಾಡಿದರು. ನವದೆಹಲಿ ಲೋಕಸಭಾ ಕ್ಷೇತ್ರದ ಆಮ್ ಆದ್ಮಿ ಪಕ್ಷದ ಅಭ್ಯರ್ಥಿ ಸೋಮನಾಥ್ ಭಾರ್ತಿ ಕರೋಲ್ ಬಾಗ್ ಪ್ರದೇಶದಲ್ಲಿ ಸಾರ್ವಜನಿಕ ಸಭೆ ನಡೆಸಿದರು. ಪೂರ್ವ-ದೆಹಲಿ ಕ್ಷೇತ್ರದಲ್ಲಿ ಆಮ್ ಆದ್ಮಿ ಪಕ್ಷದ ಅಭ್ಯರ್ಥಿ ಕುಲದೀಪ್ ಕುಮಾರ್ ಗಾಂಧಿನಗರ ಪ್ರದೇಶದಲ್ಲಿ ರೋಡ್ ಶೋ ನಡೆಸಿದರು. ಏತನ್ಮಧ್ಯೆ, ಈಶಾನ್ಯ ದೆಹಲಿ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಕನ್ಹಯ್ಯಾ ಕುಮಾರ್ ಗೋಕುಲಪುರಿ ಮತ್ತು ಗಂಗಾ ವಿಹಾರ್ ಪ್ರದೇಶಗಳಲ್ಲಿ ಪಾದಯಾತ್ರೆ ನಡೆಸಿದರು. ಚಾಂದಿನಿ ಚೌಕ್ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಜೈ ಪ್ರಕಾಶ್ ಅಗರ್ವಾಲ್ ವಜೀರ್‌ಪುರದಲ್ಲಿ ಪಾದಯಾತ್ರೆ ನಡೆಸಿದರು. ದೆಹಲಿಯ ಏಳು ಲೋಕಸಭಾ ಕ್ಷೇತ್ರಗಳಿಗೆ ಒಟ್ಟು ೧೬೨ ಅಭ್ಯರ್ಥಿಗಳು ಕಣದಲ್ಲಿದ್ದಾರೆ. ಆರನೇ ಹಂತದಲ್ಲಿ ನಡೆಯಲಿರುವ ಚುನಾವಣೆಗೆ ಮೇ ೨೫ ರಂದು ಮತದಾನ ನಡೆಯಲಿದೆ.

<><*<><>*><>

ಕೌಶಲ್ಯದ ಅತ್ಯುನ್ನತ ಗುಣಮಟ್ಟವನ್ನು ಪ್ರದರ್ಶಿಸಲು ವಿನ್ಯಾಸಗೊಳಿಸಲಾದ ಭಾರತದ ಅತಿದೊಡ್ಡ ಕೌಶಲ್ಯ ಸ್ಪರ್ಧೆ 'ಇಂಡಿಯಾ ಸ್ಕಿಲ್ಸ್ ಸ್ಪರ್ಧೆ-೨೦೨೪' ನವದೆಹಲಿಯಲ್ಲಿಂದು ಪ್ರಾರಂಭವಾಗಲಿದೆ. ಈ ಸ್ಪರ್ಧೆಯಲ್ಲಿ ೩೦ ಕ್ಕೂ ಹೆಚ್ಚು ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಂದ ೯೦೦ ಕ್ಕೂ ಹೆಚ್ಚು ವಿದ್ಯಾರ್ಥಿಗಳು ಹಾಗೂ ೪೦೦ ಕ್ಕೂ ಹೆಚ್ಚು ಉದ್ಯಮ ತಜ್ಞರು ಈ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ ಎಂದು ಕೇಂದ್ರ ಕೌಶಲ್ಯಾಭಿವೃದ್ಧಿ ಮತ್ತು ಉದ್ಯಮಶೀಲತೆ ಸಚಿವಾಲಯ ತಿಳಿಸಿದೆ. ನಾಲ್ಕು ದಿನಗಳ ಕಾಲ ನಡೆಯುವ ಈ ಸ್ಪರ್ಧೆ, ಸಾಂಪ್ರದಾಯಿಕ ಕರಕುಶಲ, ಅತ್ಯಾಧುನಿಕ ತಂತ್ರಜ್ಞಾನ

ಸೇರಿದಂತೆ ೬೧ ಕೌಶಲ್ಯಗಳನ್ನು ಮತ್ತು ಪ್ರತಿಭೆಯನ್ನು ರಾಷ್ಟ್ರಮಟ್ಟದಲ್ಲಿ ಪ್ರದರ್ಶಿಸುವ ವೇದಿಕೆಯಾಗಿದೆ. ಉತ್ತಮ ಮೂಲಸೌಕರ್ಯಗಳ ಲಭ್ಯತೆಯನ್ನು ಗಮನದಲ್ಲಿಟ್ಟುಕೊಂಡು ಕರ್ನಾಟಕ, ಹರಿಯಾಣ, ಉತ್ತರ ಪ್ರದೇಶ ಮತ್ತು ಗುಜರಾತ್‌ನಲ್ಲಿ ಒಟ್ಟು ೪೭ ಸ್ಪರ್ಧೆಗಳು ನಡೆಯಲಿದೆ. ವಿದ್ಯಾರ್ಥಿಗಳು, ಪ್ರದರ್ಶನ ಕೌಶಲ್ಯಗಳಾದ ಡ್ರೋನ್-ಫಿಲ್ಮ್ ಮೇಕಿಂಗ್, ಟೆಕ್ಸ್ಟೈಲ್-ವೀವಿಂಗ್, ಲೆದರ್-ಶೂ ಮೇಕಿಂಗ್ ಮತ್ತು ಪ್ರಾಸ್ಥೆಟಿಕ್ಸ್-ಮೇಕಪ್‌ನಲ್ಲಿ ಭಾಗವಹಿಸಲಿದ್ದಾರೆ. ಈ ಸ್ಪರ್ಧೆ ವಿಜೇತರು ಮುಂಬರುವ ಸೆಪ್ಟೆಂಬರ್‌ನಲ್ಲಿ ಫ್ರಾನ್ಸ್‌ನ ಲಿಯಾನ್‌ನಲ್ಲಿ ನಡೆಯಲಿರುವ ವಿಶ್ವ ಕೌಶಲ್ಯ ಸ್ಪರ್ಧೆಗೆ ಸಿದ್ಧರಾಗಲಿದ್ದಾರೆ.

<><*<><>*><>

ನಾಗರಿಕರು ಎಲ್ಲಕ್ಕಿಂತ ಹೆಚ್ಚಾಗಿ ರಾಷ್ಟ್ರದ ಹಿತಾಸಕ್ತಿಗಳಿಗೆ ಆದ್ಯತೆ ನೀಡಬೇಕು ಎಂದು ಉಪರಾಷ್ಟ್ರಪತಿ ಜಗದೀಪ್ ಧನಕರ್ ಹೇಳಿದ್ದಾರೆ. ದೆಹಲಿಯ ಸಂಸತ್ ಭವನದಲ್ಲಿ ಡಾ. ಸುಭಾಷ್ ಕಶ್ಯಪ್ ಅವರ ಭಗವದ್ಗೀತೆಯ ವ್ಯಾಖ್ಯಾನದ ಬಿಡುಗಡೆ ಸಮಾರಂಭದಲ್ಲಿ ಮಾತನಾಡಿದ ಅವರು, ಆಧ್ಯಾತ್ಮಿಕತೆ, ಧಾರ್ಮಿಕತೆ ಮತ್ತು ಕರ್ತವ್ಯದ ಕಡೆಗೆ ಬದ್ಧತೆಯ ಹಾದಿಯನ್ನು ಭಗವದ್ಗೀತೆ ಬೆಳಗಿಸುತ್ತದೆ ಎಂದು ಹೇಳಿದರು.

<><*<><>*><>

ತಮ್ಮ ಮೊಬೈಲ್ ಸಂಖ್ಯೆಗಳ ಸಂಪರ್ಕ ಕಡಿತಗೊಳಿಸುವುದಾಗಿ ಬೆದರಿಕೆ ಹಾಕುವ ನಕಲಿ ಕರೆಗಳನ್ನು ಸಾರ್ವಜನಿಕರು ದೂರವಿರಬೇಕು ಕೇಂದ್ರ ಸರ್ಕಾರ ನಾಗರಿಕರಿಗೆ ತಿಳಿಸಿದೆ. ದೂರಸಂಪರ್ಕ ಇಲಾಖೆಯು ನಾಗರಿಕರಿಗೆ ಇಂತಹ ನಕಲಿ ಕರೆಗಳನ್ನು ತೆಗೆದುಕೊಳ್ಳದಂತೆ ಸಲಹೆ ನೀಡಿದ್ದು, ವಿದೇಶಿ ಮೂಲದ ಮೊಬೈಲ್ ಸಂಖ್ಯೆಗಳಿಂದ ಬರುವ ವಾಟ್ಸಾಪ್ ಕರೆಗಳು ಸರ್ಕಾರಿ ಅಧಿಕಾರಿಗಳ ಹೆಸರಿನಲ್ಲಿ ಜನರನ್ನು ಬೆದರಿಸಿ, ವಂಚಿಸುವ ಬಗ್ಗೆಯೂ ಎಚ್ಚರಿಕೆ ವಹಿಸುವಂತೆ ಇಲಾಖೆ ಸಲಹೆ ನೀಡಿದೆ. ಇಂತಹ ಘಟನೆಗಳ ಕುರಿತು ಸೈಬರ್-ಅಪರಾಧ ಸಹಾಯವಾಣಿ ಸಂಖ್ಯೆ ೧೯೩೦ ರಲ್ಲಿ ವರದಿ ಮಾಡುವಂತೆ ನಾಗರಿಕರಿಗೆ ಇಲಾಖೆ ಸೂಚನೆ ನೀಡಿದೆ.

<><*<><>*><>

ಲೋಕಸಭಾ ಚುನಾವಣೆಗಳಿಗೆ ಸಂಬಂಧಿಸಿದಂತೆ ಮಾದರಿ ನೀತಿ ಸಂಹಿತೆ ಜಾರಿಗೆ ಬಂದ ನಂತರ ದಾಖಲಾಗಿದ್ದ ಶೇಕಡ ೯೦ ಕ್ಕೂ ಹೆಚ್ಚು ದೂರುಗಳನ್ನು ಇತ್ಯರ್ಥಪಡಿಸಲಾಗಿದೆ ಎಂದು ಕೇಂದ್ರ ಚುನಾವಣಾ ಆಯೋಗ ತಿಳಿಸಿದೆ. ಬಿಜೆಪಿ ಮತ್ತು ಕಾಂಗ್ರೆಸ್ ಹೊರತುಪಡಿಸಿ, ಇತರ ಯಾವುದೇ ರಾಜಕೀಯ ಪಕ್ಷಗಳ ಪ್ರಮುಖ ದೂರುಗಳು ಬಾಕಿ ಉಳಿದಿಲ್ಲ ಎಂದು ಆಯೋಗ ಮಾಹಿತಿ ನೀಡಿದೆ. ವಿವಿಧ ರಾಜಕೀಯ ಪಕ್ಷಗಳು ಮತ್ತು ಅಭ್ಯರ್ಥಿಗಳಿಂದ ೪೨೫ ದೂರುಗಳು ದಾಖಲಾಗಿದ್ದವು. ಈ ಪೈಕಿ ೪೦೦ ದೂರುಗಳಿಗೆ ಸಂಬಂಧಿಸಿದಂತೆ ಕ್ರಮ ಕೈಗೊಳ್ಳಲಾಗಿದೆ ಅಥವಾ ವಿಲೇವಾರಿ ಮಾಡಲಾಗಿದೆ ಎಂದು ಆಯೋಗ ಬಿಡುಗಡೆ ಮಾಡಿರುವ ಹೇಳಿಕೆಯಲ್ಲಿ ತಿಳಿಸಿದೆ. ಕಾಂಗ್ರೆಸ್ ೧೭೦, ಬಿಜೆಪಿ ೯೫ ಹಾಗೂ ಇತರ ಪಕ್ಷಗಳಿಂದ ೧೬೦ ದೂರುಗಳು ಸಲ್ಲಿಕೆಯಾಗಿದ್ದವು ಎಂದು ಚುನಾವಣಾ ಆಯೋಗ ಹೇಳಿದೆ.

<><*<><>*><>

೭೭ನೇ ಕೇನ್ಸ್ ಚಲನಚಿತ್ರೋತ್ಸವ ಫ್ರಾನ್ಸ್‌ನ ಕೇನ್ಸ್‌ನಲ್ಲಿ ನಿನ್ನೆ ಆರಂಭವಾಗಿದೆ. ೧೨ ದಿನಗಳ ಈ ಉತ್ಸವದಲ್ಲಿ ಭಾರತ ಭಾಗಿಯಾಗಿದೆ. ಕೇಂದ್ರ ಸರ್ಕಾರ, ರಾಜ್ಯ ಸರ್ಕಾರಗಳು ಮತ್ತು ಚಿತ್ರೋದ್ಯಮದ ಪ್ರತಿನಿಧಿಗಳನ್ನು ಒಳಗೊಂಡ ಭಾರತದ ನಿಯೋಗ ಉತ್ಸವದಲ್ಲಿ ಪಾಲ್ಗೊಂಡಿದೆ. ಭಾರತ, ಇದೇ

ಮೊದಲ ಬಾರಿಗೆ ಕೇನ್ಸ್ ಚಲನಚಿತ್ರೋತ್ಸವದಲ್ಲಿ ಭಾರತ್ ಪರ್ವ್ ಎಂಬ ಕಾರ್ಯಕ್ರಮವನ್ನು ಆಯೋಜಿಸಲಿದೆ. ಕೇನ್ಸ್‌ನಲ್ಲಿ ಭಾರತದ ವೇದಿಕೆಯನ್ನು ಪ್ರಾರಂಭ ಮಾಡುವುದರಿಂದ ಭಾರತದ ಚಲನಚಿತ್ರೋದ್ಯಮದ ಸಮುದಾಯ ವಿವಿಧ ಚಟುವಟಿಕೆಗಳನ್ನು ನಡೆಸಲು ಸಹಕಾರಿಯಾಗಲಿದೆ. ಭಾರತ್ ಪರ್ವ್‌ದಲ್ಲಿ ೫೫ನೇ ಭಾರತೀಯ ಅಂತಾರಾಷ್ಟ್ರೀಯ ಚಲಚಿತ್ರೋತ್ಸವ-೨೦೨೪ರ ಅಧಿಕೃತ ಪೋಸ್ಟರ್ ಮತ್ತು ಟ್ರೈಲರ್ ಬಿಡುಗಡೆಯಾಗಲಿದೆ. ಈ ವರ್ಷದ ಭಾರತೀಯ ಅಂತಾರಾಷ್ಟ್ರೀಯ ಚಲಚಿತ್ರೋತ್ಸವ ಬರುವ ನವೆಂಬರ್ ೨೦ ರಿಂದ ೨೮ ರವರೆಗೆ ಗೋವಾದಲ್ಲಿ ನಡೆಯಲಿದೆ.

<><*<><>*><>

ಭಾರತದ ಪುರಾತನ ಅರೆಸೇನೆ ಪಡೆಯಾಗಿರುವ ಅಸ್ಸಾಂ ರೈಫಲ್ಸ್, ಇದೇ ತಿಂಗಳ ೧೮ರಂದು ಕಾಲಿಮ್‌ಪೊಂಗ್‌ನಲ್ಲಿ ನಿವೃತ್ತ ಯೋಧರ ರ್‍ಯಾಲಿಯನ್ನು ಏರ್ಪಡಿಸಿದೆ. 'ನಮಗಾಗಿ ಸೇವೆ ಸಲ್ಲಿಸಿದವರಿಗೆ ಸೇವೆ ಮಾಡುವುದು' ಎಂಬ ಹೆಸರಿನ ಈ ರ್‍ಯಾಲಿ ಸಂದರ್ಭದಲ್ಲಿ ಪಶ್ಚಿಮ ಬಂಗಾಳ, ಸಿಕ್ಕೀಂ ಮತ್ತು ಈಶಾನ್ಯ ರಾಜ್ಯಗಳ ನಿವೃತ್ತ ಯೋಧರನ್ನು ಗೌರವಿಸಲಾಗುವುದು ಮತ್ತು ಅವರಿಗೆ ಬೆಂಬಲ ಸೂಚಿಸುವ ನಿರ್ಣಯ ಕೈಗೊಳ್ಳಲಾಗುವುದು. ಅಸ್ಸಾಂ ರೈಫಲ್ಸ್‌ನ ಲೆಫ್ಟಿನೆಂಟ್ ಜನರಲ್ ಪಿ.ಸಿ.ನಾಯರ್ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

<><*<><>*><>

ಭಾರತದ ಮಹಿಳಾ ಟೇಬಲ್ ಟೆನಿಸ್ ಆಟಗಾರ್ತಿ ಮನಿಕಾ ಬಾತ್ರಾ, ವಿಶ್ವ ಮಹಿಳಾ ಸಿಂಗಲ್ಸ್ ಶ್ರೇಯಾಂಕದಲ್ಲಿ ಅಗ್ರ ೨೫ ರೊಳಗೆ ಸ್ಥಾನಪಡೆದ ಮೊದಲ ಭಾರತೀಯ ಮಹಿಳಾ ಆಟಗಾರ್ತಿ ಎನಿಸಿಕೊಂಡಿದ್ದಾರೆ. ಕಳೆದ ವಾರ ಸೌದಿ ಸ್ಮ್ಯಾಶ್‌ನಲ್ಲಿ ಅವರಿಗೆ ಸಿಕ್ಕ ಯಶಸ್ಸಿನಿಂದ ವೃತ್ತಿಜೀವನದ ಅತ್ಯುತ್ತಮ ೨೪ನೇ ಶ್ರೇಯಾಂಕಕ್ಕೆ ಏರಿದ್ದಾರೆ. ಸಿಂಗಲ್ಸ್ ಟೇಬಲ್ ಟೆನ್ನಿಸ್‌ನಲ್ಲಿ ಭಾರತೀಯರೊಬ್ಬರು ಗಳಿಸಿದ ಅತ್ಯುನ್ನತ ಶ್ರೇಣಿಗಾಗಿ ಜಿ. ಸತ್ಯನ್ ಅವರ ಐದು ವರ್ಷಗಳ ಹಳೆಯ ದಾಖಲೆಯನ್ನು ಇವರು ಸರಿಗಟ್ಟಿದ್ದಾರೆ. ವೈಯಕ್ತಿಕ ಮತ್ತು ತಂಡ ವಿಭಾಗಗಳಲ್ಲಿ ೨೦೧೮ ರ ಕಾಮನ್‌ವೆಲ್ತ್ ಗೇಮ್ಸ್ ಚಿನ್ನದ ಪದಕ ವಿಜೇತೆ ಮಣಿಕಾ, ಜೆಡ್ಡಾದಲ್ಲಿ ಜಂii ಸಾಧಿಸಿದ ನಂತರ ೧೫ ಸ್ಥಾನಗಳ ಜಿಗಿತದೊಂದಿಗೆ ಅಗ್ರ ೨೫ರೊಳಗೆ ಸ್ಥಾನ ಪಡೆದಿದ್ದಾರೆ.

<><*<><>*><>

ಪ್ಯಾರಿಸ್‌ನಲ್ಲಿ ನಡೆಯಲಿರುವ ೨೦೨೪ ಒಲಿಂಪಿಕ್ ಕೀಡಾಕೂಟದ ಬಗ್ಗೆ ಬಹುತೇಕ ಜನರಲ್ಲಿ ಕುತೂಹಲ ಹೆಚ್ಚಾಗಿದ್ದರೆ, ಕೇಂದ್ರ ಯುವಜನ ವ್ಯವಹಾರಗಳು ಮತ್ತು ಕ್ರೀಡೆಗಳ ಮಿಷನ್ ಒಲಿಂಪಿಕ್ ಘಟಕ- ಎಂ.ಒ.ಸಿ, ೨೦೨೮ರಲ್ಲಿ ನಡೆಯಲಿರುವ ಲಾಸ್ ಎಂಜಲೀಸ್ ಒಲಿಂಪಿಕ್ ಕ್ರೀಡಾಕೂಟಕ್ಕೆ ಈಗಿನಿಂದಲೇ ಪೂರ್ವ ಸಿದ್ಧತೆಗಳನ್ನು ಮಾಡಿಕೊಳ್ಳಲು ಮುಂದಾಗಿದೆ. ಟಾರ್ಗೆಟ್ ಒಲಿಂಪಿಕ್ ಪೋಡಿಯಮ್ ಸ್ಕೀಮ್‌ನ ಅಭಿವೃದ್ಧಿ ಸಮೂಹಕ್ಕೆ ಈಗಾಗಲೇ ಮೂವರು ಸ್ಕ್ವಾಶ್ ಆಟಗಾರರನ್ನು ಸೇರ್ಪಡೆ ಮಾಡಿಕೊಳ್ಳಲಾಗಿದೆ. ಕಳೆದ ಅಕ್ಟೋಬರ್‌ನಲ್ಲೇ ೨೦೨೮ ರ ಒಲಿಂಪಿಕ್ ಕಾರ್ಯಕ್ರಮಕ್ಕೆ ಸ್ಕ್ವಾಶ್ ಆಟಗಾರರ ಸೇರ್ಪಡೆ ನಂತರ ಚಟುವಟಿಕೆಗಳಿಗೆ ವೇಗ ನೀಡಲಾಗಿದೆ.

<><*<><>*><>

ನವದೆಹಲಿಯ ಅರುಣ್ ಜೇಟ್ಲಿ ಕ್ರೀಡಾಂಗಣದಲ್ಲಿ ನಿನ್ನೆ ರಾತ್ರಿ ನಡೆದ ಐಪಿಎಲ್ ಕ್ರಿಕೆಟ್ ಪಂದ್ಯದಲ್ಲಿ ಡೆಲ್ಲಿ ಕ್ಯಾಪಿಟಲ್ಸ್, ಲಕ್ನೋ ಸೂಪರ್ ಜೈಂಟ್ಸ್ ತಂಡವನ್ನು ೧೯ ರನ್‌ಗಳಿಂದ ಪರಾಭವಗೊಳಿಸಿದೆ.

**<><*<>** ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು **<>*><>**

**<><*<>** ನಮ್ಮ ಮುಂದಿನ ವಾರ್ತಾ ಪ್ರಸಾರ ಅಪರಾಹ್ನ ೧.೧೦ ಕ್ಕೆ **<>*><>**